ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 607 (744)

ಮಾನ್ಯ ಸದಸ್ಯರ ಹೆಸರು : ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ)

ವಿಷಯ : ನಾಡಪ್ರಭು ಕೆಂಪೇಗೌಡ 500 ವರ್ಷದ ಕೋಟೆ ಶಿಥಿಲಗೊಂಡಿರುವ ಬಗ್ಗೆ

ಉತ್ತರಿಸುವ ದಿನಾಂಕ : 25.09.2020

ಉತ್ತರಿಸುವ ಸಚಿವರು : ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

****

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ನಾಡು ಪ್ರಭು ಕೆಂಪೇಗೌಡರು ಮಾಗಡಿಯಲ್ಲಿ 500 ವರ್ಷಗಳ ಹಿಂದೆ ಕೋಟೆ ನಿರ್ಮಿಸಿದ್ದು, ಕೋಟೆಯು ಶಿಥಿಲಾವಸ್ಥೆಗೊಂಡಿರುವುದರಿಂದ ಈ ಕೋಟೆಗೆ ಪುರಾತತ್ವ ಇಲಾಖೆಯಿಂದ ಜೀರ್ಣೋದ್ಧಾರಕ್ಕಾಗಿ ನಿಗದಿಯಾಗಿರುವ ಅನುದಾನ ಎಷ್ಟು; ಜೀರ್ಣೋದ್ಧಾರಕ್ಕಾಗಿ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;	ರಾಮನಗರ ಜಿಲ್ಲೆ ಮಾಗಡಿ ತಾಲ್ಲೂಕು ಮಾಗಡಿ ಕೋಟೆಯ ಸಂರಕ್ಷಣೆಗೆ ರೂ.486.79 ಲಕ್ಷಗಳ ಅಂದಾಜನ್ನು ತಯಾರಿಸಲಾಗಿದ್ದು, ಅದರಂತೆ ಕೋಟೆಯ ಸಂರಕ್ಷಣೆಗೆ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಈವರೆಗೆ ರೂ.389.43 ಲಕ್ಷಗಳ ಅನುದಾನವು ಬಿಡುಗಡೆಯಾಗಿರುತ್ತದೆ.
ಆ)	ಕೋಟೆ ಜೀರ್ಣೋದ್ಧಾರಕ್ಕಾಗಿ ಈವರೆಗೂ ಎಷ್ಟು ಅನುದಾನ ವೆಚ್ಚವಾಗಿದೆ; ಉಳಿಕೆ ಅನುದಾನ ಎಷ್ಟು;	ಕೋಟೆ ಸಂರಕ್ಷಣಾ ಕಾಮಗಾರಿಗಾಗಿ ರೂ.389.43 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಬಿಡುಗಡೆ ಮಾಡಿರುವ ಅನುದಾನದ ಪೈಕಿ ರೂ.219.46 ಲಕ್ಷಗಳ ಅನುದಾನವನ್ನು ವೆಚ್ಚ ಮಾಡಿದ್ದು, ರೂ.169.97 ಲಕ್ಷಗಳ ಅನುದಾನವು ಉಳಿದಿರುತ್ತದೆ.
ಇ)	ಕೋಟೆಯ ಜೀರ್ಣೋದ್ಧಾರ ಅರ್ಧದಲ್ಲೇ ನಿಂತಿದ್ದು, ಕಾಮಗಾರಿ ಸ್ಥಗಿತಗೊಳಿಸಿರಲು ಕಾರಣವೇನು; ಕೋಟೆಯ ಜೀರ್ಣೋದ್ಧಾರ ಪೂರ್ಣಗೊಳಿಸಲು ಇನ್ನೂ ಎಷ್ಟು ಸಮಯಾವಕಾಶ ಬೇಕು? (ಸಂಪೂರ್ಣ ಮಾಹಿತಿ ನೀಡುವುದು)	ಇಲಾಖೆ ವತಿಯಿಂದ ಕೋಟೆಯ ಪೂರ್ಣ ಸಂರಕ್ಷಣೆ ಮಾಡಲು ರೂ.486.79 ಲಕ್ಷಗಳ ಅಂದಾಜನ್ನು ತಯಾರಿಸಿ ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿಯನ್ನು ಪಡೆದು ನಿಯಮಾನುಸಾರ ಟೆಂಡರ್ ಕರೆದು ದಿ:24.02.2014 ರಂದು ಗುತ್ತಿಗೆದಾರರಿಗೆ ಕಾರ್ಯಾದೇಶವನ್ನು ನೀಡಲಾಗಿರುತ್ತದೆ. ಅದರಂತೆ ಕೋಟೆಯ ಸಂರಕ್ಷಣೆಯನ್ನು ಕೈಗೊಳ್ಳಲಾಗಿರುತ್ತದೆ. ಸದರಿ ಕೋಟೆಯ ಅಭಿವೃದ್ಧಿಗಾಗಿ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ನೀಡಿರುವ ಕೋಷ್ಟಕದಲ್ಲಿ 8 components ಅನುಷ್ಠಾನಗೊಳಿಸಲು ರೂ.486.79 ಲಕ್ಷಗಳನ್ನು ನಿಗದಿಪಡಿಸಲಾಗಿರುತ್ತದೆ. ಅದರಂತೆ Site development works ಅಡಿ ಕೋಟೆಯ ಉತ್ತರ ಮತ್ತು ಪಶ್ಚಿಮ ಭಾಗಗಳ ಒಟ್ಟಾರೆ 210 ಮೀಟರುಗಳ ಕೋಟೆ ಗೋಡೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. ಪೂರ್ವ ಭಾಗದ 110 ಮೀಟರ್ ಕೋಟೆ ಗೋಡೆಯ ಭಾಗದ (ಖಾಸಗಿ ಬಸ್ ನಿಲ್ದಾಣ) 110 ಮೀಟರ್ Earth work ಪ್ರಗತಿಯಲ್ಲಿರುತ್ತದೆ. ಈ ಯೋಜನೆಗೆ ಅಗತ್ಯವಿರುವ ಅನುದಾನವನ್ನು ಈಗಾಗಲೇ ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದ್ದು, ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಅನುಮೋದನೆಯಂತೆ 8 components ಒಳಗೊಂಡ ಕಾಮಗಾರಿಯನ್ನು ಅನುಷ್ಠಾನಗೊಳಿಸಬೇಕಾಗಿದ್ದು ಅದರಂತೆ, ಯೋಜನೆಯನ್ನು ಪೂರ್ಣಗೊಳಿಸಲು ಅನುಷ್ಠಾನ ಸಂಸ್ಥೆಗೆ ಸೂಚನೆ ನೀಡಿದ್ದು ಶೀಘ್ರದಲ್ಲಿಯೇ ಕಾಮಗಾರಿ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು.

ಸರ್ಕಾರ ಟಿಓಆರ್ 191 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.